ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಮಂಡ್ಯ ಜಿಲ್ಲೆಯ ಕೋವಿಡ್-19 ರೋಗದ ಸಂಬಂಧ ಕ್ವಾರಂಟೈನ್/ಐಸೋಲೇಶನ್ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

750 (970) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯ ವಿವಿಧ ತಾಲ್ಲೂಕುಗಳಲ್ಲಿ ಕೋವಿಡ್-19ರ ಸಂಬಂಧ ಆರೋಗ್ಯ ಇಲಾಖೆಯಿಂದ ಎಷ್ಟು ಕ್ವಾರಂಟೈನ್/ಐಸೋಲೇಶನ್ ಕೇಂದ್ರಗಳನ್ನು ಸ್ಥಾಪನೆ ಮಾಡಲಾಗಿದೆ; ಈ ಕೇಂದ್ರಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರದ ಮಾರ್ಗಸೂಚಿ ಮಾನದಂಡಗಳಾವುವು ; ಈ ಸಂಬಂಧ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಈವರೆವಿಗೆ ಖರ್ಚು ಮಾಡಿರುವ ಹಣದ ವಿವರ ನೀಡುವುದು;

(ಆ) ಕ್ವಾರಂಟೈನ್/ಐಸೋಲೇಶನ್ ಕೇಂದ್ರಗಳಲ್ಲಿ ಈವರೆವಿಗೆ ದಾಖಲಾಗಿ ಬಿಡುಗಡೆಯಾಗಿರುವ ಪ್ರಕರಣಗಳೆಷ್ಟು ; ಪ್ರಸ್ತುತ, ಕ್ವಾರಂಟೈನ್ /ಐಸೋಲೇಶನ್ ಕೇಂದ್ರಗಳಲ್ಲಿರುವವರ ಸಂಖ್ಯೆ ಎಷ್ಟು ;ಈವರೆವಿಗೆ ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಕೊರೋನದಿಂದ ಮೃತಪಟ್ಟವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಇ) ಕೊರೋನಾ ಪೀಡಿತ ಒಬ್ಬ ರೋಗಿ ಗುಣಮುಖನಾಗಲು ವೈದ್ಯಕೀಯ ವೆಚ್ಚ ಭರಿಸಲು ಕೇಂದ್ರ ಸರ್ಕಾರದಿಂದ ಎಷ್ಟು ಹಣ ಬಿಡುಗಡೆಯಾಗಿದೆ ?